1083 ಶ್ರೀ ನರಸಿಂಹಸ್ವಾಮಿ ಜೆ. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿನ ಸುಟ್ಟ ಗಾಯಗಳ ಚಿಕಿತ್ಸಾ ವಿಭಾಗದ ದುಸ್ಥಿತಿಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ರೋಗಿಗಳಿಗೆ ಸರಿಯಾದ ಚಿಕಿತ್ಸೆ ದೊರಕದೆ ತೊಂದರೆ ಪಡುತ್ತಿರುವುದು ಸರ್ಕಾರಕ್ಕೆ ಮಾಹಿತಿ ಇದೆಯೇ;

ಇ) ಇದ್ದಲ್ಲಿ ಯಾವ ಯಾವ ಆಸ್ಪತ್ರೆಗಳಲ್ಲಿ ಸುಟ್ಟ ಗಾಯಗಳ ಚಿಕಿತ್ಸಾ ವಿಭಾಗವನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆ ಹಾಗೂ ಎಂದಿನಿಂದ ಪ್ರಾರಂಭಿಸಲಾಗುವುದು;

ಈ) ವಿಕ್ಟೋರಿಯಾ ಆಸ್ಪತ್ರೆಯ ಈ ವಿಭಾಗದ ದುಸ್ಥಿತಿಗೆ ಕಾರಣರಾದ ಅಧಿಕಾರಿ/ವೈದ್ಯರ ಮೇಲೆ ಕ್ರಮ ಜರುಗಿಸಲಾಗುವುದೇ?

ಶ್ರೀ ರಾಮಚಂದ್ರಗೌಡ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಸರಿಯಾದ ಮತ್ತು ಒಳ್ಳೆಯ ಚಿಕಿತ್ಸೆ ನೀಡಲಾಗುತ್ತಿದೆ.

ಇ) ಈಗಾಗಲೇ ಕಾರ್ಯನಿರ್ವಹಿಸುತ್ತಿದೆ.

ಈ) ಉದ್ಭವಿಸುವುದಿಲ್ಲ

ಹಾವೇರಿ ತಾಲ್ಲೂಕು ಮಕೋಳ ಗ್ರಾಮದಲ್ಲಿ ವಾಲ್ಮೀಕಿ ಭವನ ನಿರ್ಮಿಸುವುದು

1019 ಶ್ರೀ ಓಲೇಕಾರ ನೆಹರೂ ಚನ್ನಬಸಪ್ಪ (ಹಾವೇರಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾವೇರಿ ತಾಲ್ಲೂಕು ಮಕೋಳ ಗ್ರಾಮದಲ್ಲಿ ಹೆಚ್ಚು ವಾಲ್ಮೀಕಿ ಜನಾಂಗ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಜನಾಂಗಕ್ಕೆ ಅನುಕೂಲವಾಗುವಂತೆ ವಾಲ್ಮೀಕಿ ಭವನ/ಸಮುದಾಯ ಭವನ ನಿರ್ಮಾಣ ಮಾಡಲು ಅಂದಾಜನ್ನು ಕಳುಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ವಾಲ್ಮೀಕಿ ಭವನ/ಸಮುದಾಯ ಭವನ ನಿರ್ಮಿಸಿ ಈ ಜನಾಂಗದ ಸಮಾಜಕ್ಕೆ ಅನುಕೂಲ ಮಾಡಬೇಕೆಂಬ ಉದ್ದೇಶ ಸರ್ಕಾರಕ್ಕೆ ಇದೆಯೇ?

ಶ್ರೀ ಡಿ. ಸುಧಾಕರ (ಮಾನ್ಯ ಸಮಾಜ ಕಲ್ಯಾಣ ಸಚಿವರು):

ಅ) ಮಕೋಳ ಗ್ರಾಮದ ಒಟ್ಟು ಜನಸಂಖ್ಯೆ 2457, ಇದರಲ್ಲಿ ಪರಿಶಿಷ್ಟ ವರ್ಗದವರ ಜನಸಂಖ್ಯೆ 482 ಇರುತ್ತದೆ.

ಆ) ಹೌದು.

ಇ) ಅನುದಾನದ ಲಭ್ಯತೆಗೆ ಅನುಗುಣವಾಗಿ ಸಮುದಾಯ ಭವನ ನಿರ್ಮಾಣ ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

ತಾಂತ್ರಿಕ ಕೋರ್ಸುಗಳಲ್ಲಿ ಓದುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವ ಕುರಿತು

1020 ಶ್ರೀ ಓಲೇಕಾರ ನೆಹರೂ ಚನ್ನಬಸಪ್ಪ (ಹಾವೇರಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಾಂತ್ರಿಕ ಕೋರ್ಸುಗಳಲ್ಲಿ ಓದುತ್ತಿರುವ ಎಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ತಾಂತ್ರಿಕ ಕೋರ್ಸುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ;

ಆ) ಸಮಾಜ ಕಲ್ಯಾಣ ಇಲಾಖೆಯಲ್ಲಿ 2008–09 ಸಾಲಿನಲ್ಲಿ ವಿವಿಧ ಬಾಬ್ತುಗಳಿಗೆ ನಿಗದಿಪಡಿಸಿದ ಹಣವೆಷ್ಟು; ಖರ್ಚಾಗದೇ ಉಳಿದ ಹಣವೆಷ್ಟು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು):

ಅ) ಪರಿಶಿಷ್ಟ ಜಾತಿಯ ಪೋಷಕರ ವಾರ್ಷಿಕ ಆದಾಯ ರೂ. 1.00 ಲಕ್ಷಗಳ ಮಿತಿಯೊಳಗಿರುವ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುತ್ತಿದೆ. ತಾಂತ್ರಿಕ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ 4208 ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಿಂದ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಕ್ರಮ ಕೈಗೊಂಡಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ರಾಜ್ಯಾದ್ಯಂತ ತಾಂತ್ರಿಕ ಕೋರ್ಸುಗಳಲ್ಲಿ ಓದುತ್ತಿರುವ 8449 ವಿದ್ಯಾರ್ಥಿಗಳಿಗೆ ಆಯವ್ಯಯದಲ್ಲಿ